# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಮಂಜುನಾಥ ಭಂಡಾರಿ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 480 |
| ಉತ್ತರಿಸಬೇಕಾದ ದಿನಾಂಕ | : | 08.12.2023 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕದಲ್ಲಿ ಗ್ರಾಮ ಪಂಚಾಯಿತಿಗಳಿಗೆ ವಾರ್ಷಿಕವಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ನೀಡುತ್ತಿರುವ ವಿವಿಧ ಅನುದಾನಗಳು ಯಾವುವು: ನೀಡುತ್ತಿರುವ; ಈ ಅನುದಾನಗಳನ್ನು ವೆಚ್ಚ ಮಾಡುವ ನಿಯಮಗಳನ್ನು ಗ್ರಾಮ ಪಂಚಾಯಿತಿ ನಿಧಿಯಿಂದ ಖರ್ಚು ಮಾಡುವಲ್ಲಿ ಅನ್ವಯಿಸುವ ನಿಯಮಗಳೇನು; (3 ವರ್ಷಗಳ ವಿವರ ನೀಡುವುದು;) | 15ನೇ ಹಣಕಾಸು ಆಯೋಗದ ಅನುದಾನದಡಿ ಗ್ರಾಮ ಪಂಚಾಯಿತಿಗಳಿಗೆ ಕಳೆದ 03 ವರ್ಷಗಳಲ್ಲಿ ಬಿಡುಗಡೆ ಮಾಡಲಾದ ಅನುದಾನದ ವಿವರ ಈ ಕೆಳಗಿನಂತಿದೆ.<br><br>(ರೂ.ಲಕ್ಷಗಳಲ್ಲಿ)<br>2020 –21: 273445.00<br>2021–22: 202045.00<br>2022–23: 209355.00<br><br>(15ನೇ ಹಣಕಾಸು ಆಯೋಗದ ಅನುದಾನವನ್ನು ವೆಚ್ಚ ಮಾಡುವ ಕುರಿತ ಮಾರ್ಗ ಸೂಚಿಯನ್ನು ಲಗತ್ತಿಸಿದೆ).<br><br>ರಾಜ್ಯ ಹಣಕಾಸು ಆಯೋಗದ ಅನುದಾನದಡಿ ಗ್ರಾಮ ಪಂಚಾಯಿತಿಗಳಿಗೆ ಕಳೆದ 03 ವರ್ಷಗಳಲ್ಲಿ ಬಿಡುಗಡೆ ಮಾಡಲಾದ ಅನುದಾನದ ವಿವರ ಈ ಕೆಳಗಿನಂತಿದೆ.<br><br>(ರೂ.ಲಕ್ಷಗಳಲ್ಲಿ)<br>2020 – 21: 90299.00<br>2021-22: 90299.00<br>2022-23: 120218.00 |
| ಆ) | ಗ್ರಾಮ ಪಂಚಾಯಿತಿಗಳಿಗೆ ಹೊರಿಸುತ್ತಿರುವ ಜವಾಬ್ದಾರಿಗಳು ಮತ್ತು ಖರ್ಚು ಭರಿಸಬೇಕಾದ ಅಗತ್ಯಗಳು ಹೆಚ್ಚಿದ್ದರೂ ಪೂರಕವಾಗಿ ಸಿಬ್ಬಂದಿ ನೇಮಕಾತಿ ಮಾಡಲು ಹಾಗೂ ಗ್ರಾಮ ಪಂಚಾಯಿತಿ ಮತ್ತಿತರ ನಿಧಿಗಳಿಂದ ಖರ್ಚು ಭರಿಸುವ ನಿಯಮಗಳನ್ನು ಪರಿಷ್ಕರಿಸದಿರಲು ಕಾರಣಗಳೇನು; 1994ರಲ್ಲಿ ರೂಪಿಸಲಾದ ಆಯವ್ಯಯ ಮತ್ತು ಲೆಕ್ಕಪತ್ರ ನಿಯಮಾವಳಿಗಳಿಗೆ ಅಗತ್ಯ ತಿದ್ದುಪಡಿಯನ್ನು ಮಾಡಲು ಉದ್ದೇಶಿಸಲಾಗಿದೆಯೇ; ಅನೇಕ ಸಂದರ್ಭಗಳಲ್ಲಿ ಹಳೆಯ ನಿಯಮಗಳಿಂದಾಗಿ ಗ್ರಾಮ ಪಂಚಾಯಿತಿಗಳಲ್ಲಿ ವೆಚ್ಚಗಳನ್ನು ಲೆಕ್ಕಪರಿಶೋಧನಾ ಇಲಾಖೆಯವರು ಅಕ್ಷೇಪಣೆ/ವಸೂಲಾತಿಗೆ ಸೂಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವಿರ ನೀಡುವುದು) | ಗ್ರಾಮ ಪಂಚಾಯಿತಿ ಸಿಬ್ಬಂದಿ ನೇಮಕಾತಿ ಕುರಿತು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು – 2020 ಹೊರಡಿಸಲಾಗಿದ್ದು, ನಿಯಮಗಳಂತೆ ಸಿಬ್ಬಂದಿ ನೇಮಕಾತಿ ಮಾಡಿಕೊಳ್ಳಲು ತಿಳಿಸಲಾಗಿದೆ.<br><br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು – 2006 ಕ್ಕೆ ತಿದ್ದು ಪಡಿತರುವ ಪ್ರಕ್ರಿಯೆ ಜಾರಿಯಲ್ಲಿದೆ. ತಿದ್ದುಪಡಿ ಮೂಲಕ ಗ್ರಾಮ ಪಂಚಾಯಿತಿಗಳ ಕಾರ್ಯನಿರ್ವಹಣೆಗೆ ಪೂರಕವಾಗಿ ನಿಯಮಗಳಲ್ಲಿ ಬದಲಾವಣೆ ಮಾಡಲಾಗುವುದು. |

| | | |
|---|---|---|
| ಇ) | ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಪ್ರಸ್ತುತ ಇರುವ ಸಿಬ್ಬಂದಿ ಮಾದರಿ ಯಾವುವು; ಕೆಲವು ಜಿಲ್ಲೆಗಳಲ್ಲಿ ಸರ್ಕಾರದಿಂದ ಅನುಮೋದಿತ ಸಿಬ್ಬಂದಿ ಮಾದರಿಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಇರುವ ನೀರು ನಿರ್ವಾಹಕರಿಂದಾಗಿ ಸಿಬ್ಬಂದಿ ಕುರಿತ ನೇಮಕಾತಿ ಹಾಗೂ ಇತರ ಸಮಸ್ಯೆಗಳು ಸೃಷ್ಟಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ರಾಜ್ಯದ ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ನೇಮಕಾತಿಗೆ ಸಂಬಂಧಿಸಿದಂತೆ, ಏಕರೂಪದ ನಿಯಮಗಳನ್ನು ಜಾರಿಗೆ ತರುವ ಉದ್ದೇಶದಿಂದ ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು – 2020ನ್ನು ಅಧಿಸೂಚನೆ ಹೊರಡಿಸಲಾಗಿದೆ. |
| ಈ) | ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಯಾವುದೇ ಸಭೆ, ಸಮಾರಂಭ ಕಟ್ಟಡ ಶಂಕುಸ್ಥಾಪನೆ, ಉದ್ಘಾಟನೆ, ಮತಗಟ್ಟೆ ನಿರ್ವಹಣೆ, ಇಲಾಖೇತರ ಮತ್ತು ಇತರ ಇಲಾಖೆಗಳ ಸಹಯೋಗದೊಂದಿಗೆ ಮಾಡುವ ಕಾರ್ಯಕ್ರಮಗಳಿಗೆ ಗ್ರಾಮ ಪಂಚಾಯಿತಿ ಅನುಸರಿಸಬೇಕಾದ ಶಿಷ್ಟಾಚಾರವೇನು; ಖರ್ಚು ಮಾಡಬಹುದಾದ ಹಣಕಾಸಿನ ಗರಿಷ್ಠ ಮಿತಿ ಎಷ್ಟು; ಹಾಗೂ ಈ ಮೊತ್ತವನ್ನು ಯಾವ ಅನುದಾನದಿಂದ ಭರಿಸಬೇಕಾಗಿದೆ; (ದಾಖಲೆಯೊಂದಿಗೆ ವಿವರ ನೀಡುವುದು)? | ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಯಾವುದೇ ಸಭೆ, ಸಮಾರಂಭ ಕಟ್ಟಡ ಶಂಕುಸ್ಥಾಪನೆ, ಉದ್ಘಾಟನೆ, ಮತಗಟ್ಟೆ ನಿರ್ವಹಣೆ, ಇಲಾಖೇತರ ಮತ್ತು ಇತರ ಇಲಾಖೆಗಳ ಸಹಯೋಗದೊಂದಿಗೆ ಮಾಡುವ ಕಾರ್ಯಕ್ರಮಗಳಿಗೆ ಗ್ರಾಮ ಪಂಚಾಯಿತಿ ಅನುಸರಿಸಬೇಕಾದ ಮಾರ್ಗ ಸೂಚಿಯನ್ನು ಲಗತ್ತಿಸಿದೆ. |

**ಸಂಖ್ಯೆ: ಗ್ರಾಅಪ/480/ಎಲ್ಎಕ್ಯು/2ನೇಅ/2023/**

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.